# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಚನ್ನಬಸಪ್ಪ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಮೂಡಿಗೆರೆ, ಚಿಕ್ಕಮಗಳೂರು ಜಿಲ್ಲೆ, ಇವರ ಅಮಾನತ್ತು ತೆರವುಗೊಳಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 59 ವಿಸೇಜಿ 2013 ದಿ:18-7-2013
2.ಅಪರ ಪೋಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ. ಪತ್ರ ಸಂಖ್ಯೆ: ಲೋಕ್/ಐಎನ್‌ವಿ (ಜಿ)ಸಿಟಿಎಲ್/ಸಿಆರ್-4/2013 ಚಿಕ್ಕಮಗಳೂರು ದಿ: 26-11-2013.

-------

**ಪ್ರಸ್ತಾವನೆ:**

ಶ್ರೀ ಚನ್ನಬಸಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಮೂಡಿಗೆರೆ, ಚಿಕ್ಕಮಗಳೂರು ಜಿಲ್ಲೆ, ಇವರ ಮೇಲಿನ ಲೋಕಾಯುಕ್ತ ಪೋಲೀಸ್‌ರ ದಾಳಿ ಪ್ರಕರಣದಲ್ಲಿ ಇವರು ತಮ್ಮ ಬಲ್ಲಮೂಲಗಳ ಆದಾಯಕ್ಕಿಂತ ಹೆಚ್ಚಿನ ಸಂಪತ್ತು ಹೊಂದಿರುವ ಆಪಾದನೆಯ ಮೇಲೆ ಸದರಿ ಅಧಿಕಾರಿಯವರನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ದಿನಾಂಕ:18-07-2013 ರ ಸರ್ಕಾರಿ ಆದೇಶದಲ್ಲಿ ಅಮಾನತ್ತುಗೊಳಿಸಲಾಗಿತ್ತು. ಸದರಿ ಅಧಿಕಾರಿಯನ್ನು ಅಮಾನತ್ತಿನಿಂದ ತೆರವುಗೊಳಿಸುವ ಬಗ್ಗೆ ಅಪರ ಪೋಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅಭಿಪ್ರಾಯ ಕೋರಲಾಗಿ ಅವರು ಈ ಹಂತದಲ್ಲಿ ಸದರಿ ಅಧಿಕಾರಿಯನ್ನು ಅಮಾನತ್ತಿನಿಂದ ತೆರವುಗೊಳಿಸುವ ಬಗ್ಗೆ ಸೂಕ್ತ ಕ್ರಮ ತೆಗೆದುಕೊಳ್ಳಬಹುದಾಗಿದೆಯೆಂದು, ಸದರಿ ಆರೋಪಿತರನ್ನು ಅಮಾನತ್ತಿನಿಂದ ತೆರವುಗೊಳಿಸಿದರೆ ಹಿಂದೆ ಕರ್ತವ್ಯ ನಿರ್ವಹಿಸುತ್ತಿದ್ದ ಸ್ಥಳವನ್ನು ಹೊರತುಪಡಿಸಿ ಬೇರೆ ಸ್ಥಳಕ್ಕೆ ನಿಯೋಜಿಸುವುದು ಸೂಕ್ತವಾಗಿರುತ್ತದೆಂದು ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ದಿನಾಂಕ: 26-11-2013 ರ ಪತ್ರದಲ್ಲಿ ಅಭಿಪ್ರಾಯ ವ್ಯಕ್ತಪಡಿಸಿರುತ್ತಾರೆ.

ಶ್ರೀ ಚನ್ನಬಸಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಮೂಡಿಗೆರೆ, ಚಿಕ್ಕಮಗಳೂರು ಜಿಲ್ಲೆ, ಇವರನ್ನು ಅಮಾನತ್ತುಗೊಳಿಸಿ ಈಗಾಗಲೇ 6 ತಿಂಗಳು ಕಳೆದಿರುವುದರಿಂದ ಸದರಿ ಅಧಿಕಾರಿಯ ಅಮಾನತ್ತು ತೆರವುಗೊಳಿಸಿ ಸದರಿಯವರ ಮಾತೃ ಇಲಾಖೆಯಾದ ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಗೆ ಹಿಂದಿರುಗಿಸಲು ಸರ್ಕಾರವು ನಿರ್ಧರಿಸಿ ಈ ಮುಂದಿನಂತೆ ಆದೇಶಿಸಿದೆ. ಇಲಾಖೆ

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 59 ವಿಸೇಜಿ 2013,ಬೆಂಗಳೂರು, ದಿನಾಂಕ:22-01-2014**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ಚನ್ನಬಸಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಮೂಡಿಗೆರೆ, ಚಿಕ್ಕಮಗಳೂರು ಜಿಲ್ಲೆ, ಇವರ ವಿರುದ್ಧದ ಲೋಕಾಯುಕ್ತ ದಾಳಿಯ ಸಂಬಂಧದ ತನಿಖೆ ಬಾಕಿ ಇರಿಸಿ ಅವರ ಅಮಾನತ್ತು ತೆರವುಗೊಳಿಸಿ ಸದರಿ ಅಧಿಕಾರಿಯ ಸೇವೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅವರ ಮಾತೃ ಇಲಾಖೆಯಾದ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಗೆ ಹಿಂದಿರುಗಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಚಂದ್ರಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:
1.ಮಹಾಲೇಖಪಾಲರು (ಎ & ಇ) ಕರ್ನಾಟಕ, ಬೆಂಗಳೂರು.

2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ, ಒಳನಾಡು ಮತ್ತು ಜಲಸಾರಿಗೆ ಇಲಾಖೆ.
3. ಅಪರ ಪೋಲೀಸ್ - ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು.
5. ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ರವರ ಮುಖಾಂತರ).
6. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಒಳನಾಡು ಮತ್ತು ಜಲಸಾರಿಗೆ ಇಲಾಖೆ.
7. ಮಾನ್ಯ ಗ್ರಾ.ಅ. & ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
8. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಅಪರ ಕಾರ್ಯದರ್ಶಿ (ಆಡಳಿತ), ಗ್ರಾ.ಅ. & ಪಂ.ರಾಜ್ ಇಲಾಖೆ ಇವರ ಆಪ್ತ ಶಾಖೆ.
9. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
10. ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.